## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಕೆ.ಎ. ತಿಪ್ಪೇಸ್ವಾಮಿ ಇವರು ನಿಯಮ 72ರ ಅಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:-**

ರಾಜ್ಯದಲ್ಲಿ ಹಲವಾರು ಜಾತಿ/ಸಮುದಾಯಗಳು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಯಾಗಲು ಪ್ರಸ್ತಾವನೆ/ಬೇಡಿಕೆಗಳನ್ನು ರಾಜ್ಯ ಸರ್ಕಾರದ ಮುಂದಿಟ್ಟಿರುತ್ತವೆ. ಇದರ ಬಗ್ಗೆ ರಾಜ್ಯ ಸರ್ಕಾರ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲ ಹಾಗೂ ರಾಜ್ಯ ಸರ್ಕಾರ ಈ ರೀತಿ ಬಂದಿರುವ ಬೇಡಿಕೆ/ಪ್ರಸ್ತಾವನೆಗಳನ್ನು ಇತ್ಯರ್ಥಗೊಳಿಸಲು ಕುಲಶಾಸ್ತ್ರೀಯ ಅಧ್ಯಯನ ನಡೆಸಲು ನೇಮಕ ಮಾಡಿರುವ ಸಂಸ್ಥೆ ಮತ್ತು ಆ ಸಂಸ್ಥೆ ಈ ಕುಲಶಾಸ್ತ್ರೀಯ ಅಧ್ಯಯನ ನಡೆಸಿದ ಬಳಿಕ ಪ್ರತಿಯೊಂದು ಬೇಡಿಕೆ/ಪ್ರಸ್ತಾವನೆಗಳನ್ನು ಕುರಿತು ನೀಡಿರುವ ವರದಿಗಳು/ಶಿಫಾರಸ್ಸುಗಳು ಹಾಗೂ ರಾಜ್ಯ ಸರ್ಕಾರ ಈ ಕುಲಶಾಸ್ತ್ರೀಯ ಅಧ್ಯಯನ ಮುಗಿಸಿರುವ ಪ್ರಕರಣಗಳ ಬಗ್ಗೆ ಭಾರತ ಸರ್ಕಾರಕ್ಕೆ ಮಾಡಿರುವ ಶಿಫಾರಸ್ಸು ಒಳಗೊಂಡಂತೆ ಇಲ್ಲಿಯವರೆಗೆ ರಾಜ್ಯ ಸರ್ಕಾರ ಸಾರ್ವಜನಿಕರ ಗಮನಕ್ಕೆ ತಂದಿರುವುದಿಲ್ಲ.

ಮುಂದುವರೆದು, ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಈ ಜಾತಿ/ಸಮುದಾಯಗಳ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಶಿಫಾರಸ್ಸು ಮಾಡಿರುವ ಪ್ರಕರಣಗಳ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಸಾರ್ವಜನಿಕ ಮಹತ್ವದ ವಿಷಯದ ಬಗ್ಗೆ ಸದನದಲ್ಲಿ ಸರ್ಕಾರದ ಗಮನವನ್ನು ಸೆಳೆಯ ಬಯಸುತ್ತೇನೆ.

*****

**ಉತ್ತರ:-**

ರಾಜ್ಯದಲ್ಲಿನ ಕೆಳಕಂಡ ಸಮುದಾಯದವರು ಎಸ್.ಟಿ. ವರ್ಗಕ್ಕೆ ಸೇರಿಸಬೇಕೆಂದು ರಾಜ್ಯ ಸರ್ಕಾರಕ್ಕೆ ಸಲ್ಲಿಸಿರುವ ಮನವಿಗಳಂತೆ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯು ಕುಲಶಾಸ್ತ್ರೀಯ ಅಧ್ಯಯನ ಕೈಗೊಂಡು ಸರ್ಕಾರಕ್ಕೆ ಸಲ್ಲಿಸಿರುವ ಮಾಹಿತಿ (2011-12 ರಿಂದ 2022-23ರ ಅವಧಿಯಲ್ಲಿ).

| ಕ್ರ. ಸಂ. | ಅಧ್ಯಯನ ಮಾಡಿದ ಸಮುದಾಯಗಳ ವಿವರ | ಅಧ್ಯಯನ ಕೈಗೊಂಡ ಸಂಸ್ಥೆ | ಸಂಸ್ಥೆಯ ಅಭಿಪ್ರಾಯ |
|---|---|---|---|
| 1 | ಪರಿವಾರ ಮತ್ತು ತಳವಾರ ಜನಾಂಗದವರನ್ನು ಪರಿಶಿಷ್ಟ ಪಂಗಡದ ವಾಲ್ಮೀಕಿ ಸಮುದಾಯದ ಪರ್ಯಾಯ ಪದಗಳಾಗಿ ಸೇರಿಸುವ ಬಗ್ಗೆ. | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 2 | ಹಾಲಕ್ಕಿ ಒಕ್ಕಲಿಗ | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 3 | ಕುಣಬಿ | ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 4 | ದನಗರು, ಗೌಳಿ ಗೊಲ್ಲ, | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿರುವುದಿಲ್ಲ. |
| 5 | ಕಾಡುಗೊಲ್ಲ | ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 6 | ಕುಡಬಿ | ಇನ್ಸ್‌ಟಿಟ್ಯೂಟ್ ಫಾರ್ ಸೋಶಿಯಲ್ ಅಂಡ್ ಎಕನಾಮಿಕ್ ಚೇಂಜ್, ಬೆಂಗಳೂರು | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು |

| | | | |
|---|---|---|---|
| | | | ಶಿಫಾರಸ್ಸು ಮಾಡಿದೆ. |
| 7 | ಚಪ್ಪರಬಂದ | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿರುವುದಿಲ್ಲ. |
| 8 | ಹಾಲುಮತ(ಕೊಡಗು ಜಿಲ್ಲೆ) | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 9 | ಸಿದ್ದಿ ಜನಾಂಗವನ್ನು ಪ್ರಾದೇಶಿಕ ನಿರ್ಬಂಧ ತೆಗೆದು ಪರಿಶಿಷ್ಟ ವರ್ಗಕ್ಕೆ ಸೇರಿಸುವ ಬಗ್ಗೆ. | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 10 | ಹೆಳವ ಪಿಚ್ಚಗುಂಟ್ಲು | ಕನ್ನಡ ವಿಶ್ವವಿದ್ಯಾಲಯ, ಹಂಪಿ | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 11 | ಬೆಟ್ಟಕುರುಬ (ಮೈಸೂರು, ಚಾಮರಾಜನಗರ, ಕೊಡಗು ಜಿಲ್ಲೆ) ಸಮುದಾಯ | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 12 | ಗಂಗಾಮತ ಮತ್ತು ಅದರ ಪರ್ಯಾಯ ಪದಗಳು | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 13 | ಕಣಿಯನ್ ಪ್ರಾದೇಶಿಕ ನಿರ್ಬಂಧ ತೆಗೆದು ಪರಿಶಿಷ್ಟ ವರ್ಗಕ್ಕೆ ಸೇರಿಸುವ ಬಗ್ಗೆ. | ಇನ್ಸ್‌ಟಿಟ್ಯೂಟ್ ಫಾರ್ ಸೋಶಿಯಲ್ ಅಂಡ್ ಎಕನಾಮಿಕ್ ಚೇಂಜ್, ಬೆಂಗಳೂರು | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 14 | ಕೊಡಗು ಜಿಲ್ಲೆಯ ಕೊಡವ ಸಮುದಾಯ | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿರುವುದಿಲ್ಲ. |
| 15 | ಕುರುಬ ( ಬೀದರ್ ಮತ್ತು ಗುಲ್ಬರ್ಗ ಜಿಲ್ಲೆಯ ಗೊಂಡ ಸಮುದಾಯದ ಪರ್ಯಾಯ ಪದ) | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಿದೆ. |
| 16 | ಕುರುಬ ಸಮುದಾಯ ( ಕಲಬುರಗಿ, ಬೀದರ್, ಯಾದಗಿರಿ ಮತ್ತು ಕೊಡಗು ಜಿಲ್ಲೆಗಳು ಹೊರತುಪಡಿಸಿ) | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು. | ಅಧ್ಯಯನ ಪೂರ್ಣಗೊಂಡಿದ್ದು, ವರದಿ ತಯಾರಿಕೆ ಹಂತದಲ್ಲಿದೆ. |

- ರಾಜ್ಯ ಸರ್ಕಾರದಿಂದ ಕೆಳಕಂಡ ಸಮುದಾಯಗಳ ಕುಲಶಾಸ್ತ್ರೀಯ ಅಧ್ಯಯನ ವರದಿಗಳನ್ನು ಭಾರತ ಸರ್ಕಾರಕ್ಕೆ ಶಿಫಾರಸ್ಸಿನೊಂದಿಗೆ ಸಲ್ಲಿಸಲಾಗಿದೆ.
  1. ಪರಿವಾರ ಮತ್ತು ತಳವಾರ ಜನಾಂಗದವರನ್ನು ಪರಿಶಿಷ್ಟ ಪಂಗಡದ ವಾಲ್ಮೀಕಿ ಸಮುದಾಯದ ಪರ್ಯಾಯ ಪದಗಳಾಗಿ ಸೇರಿಸುವ ಬಗ್ಗೆ.
  2. ಹಾಲಕ್ಕಿ ಒಕ್ಕಲಿಗ ಸಮುದಾಯ
  3. ಕುಣಬಿ ಸಮುದಾಯ
  4. ಕಾಡುಗೊಲ್ಲ ಸಮುದಾಯ
  5. ಕುಡಬಿ ಸಮುದಾಯ

6. ಹಾಲುಮತ (ಕೊಡಗು ಜಿಲ್ಲೆ)
7. ಸಿದ್ದಿ ಜನಾಂಗವನ್ನು ಪ್ರಾದೇಶಿಕ ನಿರ್ಬಂಧ ತೆಗೆದು ಪರಿಶಿಷ್ಟ ವರ್ಗಕ್ಕೆ ಸೇರಿಸುವ ಬಗ್ಗೆ.
8. ಬೆಟ್ಟಕುರುಬ(ಮೈಸೂರು, ಚಾಮರಾಜನಗರ, ಕೊಡಗು ಜಿಲ್ಲೆ) ಸಮುದಾಯ
9. ಗಂಗಾಮತ ಮತ್ತು ಅದರ ಪರ್ಯಾಯ ಪದಗಳು

- ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದ ಪ್ರಕರಣಗಳ ಪೈಕಿ ಕೆಳಕಂಡ ಸಮುದಾಯಗಳ ಕುಲಶಾಸ್ತ್ರೀಯ ಅಧ್ಯಯನ ವರದಿಗಳನ್ನು ಪರಿಗಣಿಸಿ, ಭಾರತ ಸರ್ಕಾರ ಸದರಿ ಸಮುದಾಯಗಳನ್ನು ಕರ್ನಾಟಕದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸಲು ಆದೇಶಿಸಿರುತ್ತದೆ.

1. ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿನ ಕ್ರ.ಸಂ. 38 ರಲ್ಲಿ Naikda, Nayaka ( including Parivara and Talawara) ಎಂದು ಪರಿಗಣಿಸಿ ಆದೇಶಿಸಿರುತ್ತದೆ.
2. ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿನ ಕ್ರ.ಸಂ. 50 ರಲ್ಲಿ Siddi (in Belegavi , Dharwad and Uttara Kannada Districts) ಎಂದು ಪರಿಗಣಿಸಿ ಆದೇಶಿಸಿರುತ್ತದೆ.

ಉಳಿದ 07 ಪ್ರಕರಣಗಳು ಕೇಂದ್ರ ಸರ್ಕಾರದ ಪರಿಶೀಲನಾ ಹಂತದಲ್ಲಿರುತ್ತವೆ.

ಸಕಇ 125 ಎಸ್‌ಎಡಿ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು